ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.

ಸಿಸಿ ನಂಬರ್ **1249/2023**

| | | | |
|---|---|---|---|
| ಸಾಕ್ಷಿಯ ಹೆಸರು | : ಕೃಷ್ಣನಾಯಕ್ | | ಸಿ.ಡಬ್ಲ್ಯು 7 |
| ತಂದೆಯ ಹೆಸರು | : ಖಂಡ್ಯಾನಾಯಕ್ | | ಪಿ.ಡಬ್ಲ್ಯು 6 |
| ವಯಸ್ಸು | : 41 ವರ್ಷ | | |
| ಉದ್ಯೋಗ | : ಪಿ.ಎಸ್.ಐ | | |
| ವಾಸ ಸ್ಥಳ | : ಅಜ್ಜಂಪುರ | | |

ದಿನಾಂಕಃ**28.10.2025** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ನಾನು 2021 ರಿಂದ 2024 ಜುಲೈ ತಿಂಗಳವರೆಗೆ ತರೀಕೆರೆಯಲ್ಲಿ ಪಿ.ಎಸ್.ಐ ಎಂದು ಕೆಲಸ ಮಾಡಿದ್ದೇನೆ.

ಈ ಪ್ರಕರಣದಲ್ಲಿ ದಿನಾಂಕ 21.07.2023 ರಂದು ಪ್ರಕರಣದ ಕಡತವನ್ನು ಚಾಸ-6 ಇವರಿಂದ ಪಡೆದುಕೊಂಡು ಪರಿಶೀಲನೆ ಮಾಡಿದ್ದೇನೆ. ಅದೇ ದಿನ ಮದ್ಯದ ಪೌಚುಗಳನ್ನು ಎಫ್.ಎಸ್.ಎಲ್ ವರದಿ ಕೋರಿ ಚಾಸ-5 ಇವರಿಗೆ ಕಳುಹಿಸಿಕೊಟ್ಟಿದ್ದೇನೆ. ದಿನಾಂಕ 25.08.2023 ರಂದು ಎಫ್.ಎಸ್.ಎಲ್. ವರದಿಯನ್ನು ಪಡೆದುಕೊಂಡು ಅಂತಿಮ ವರದಿ ಸಲ್ಲಿಸಿದ್ದೇನೆ. ದಿನಾಂಕ 21.07.2023 ರ ಪತ್ರವನ್ನು ನಿಪಿ-8 ಎಂದು ಮತ್ತು ಎಫ್.ಎಸ್.ಎಲ್ ವರದಿಯನ್ನು ನಿಪಿ-9 ಎಂದು, ಸಾಕ್ಷಿಯ ಸಹಿಯನ್ನು ನಿಪಿ 9(ಎ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ

ನಾನು ಮದ್ಯವನ್ನು ಎಫ್.ಎಸ್.ಎಲ್ ವರದಿಗಾಗಿ ಕಳುಹಿಸಿಕೊಟ್ಟಿಲ್ಲ, ಮತ್ತು ಯಾವುದೇ ವರದಿಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಸುಳ್ಳು ವರದಿಯ ಆಧಾರದ ಮೇಲೆ ಸುಳ್ಳು ಅಂತಿಮ ವರದಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ **:** ಇಲ್ಲಃ

**(**ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು**.)**

ಓ ಹೇ ಕೇ ಸ ಇ ಎ ಒ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು

ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.